# <u>ಮಂಗಳೂರು ವಿಶ್ವವಿದ್ಯಾನಿಲಯ</u>

**44ನೇ ವಾರ್ಷಿಕ ಘಟಿಕೋತ್ಸವದ ಪೂರ್ವಭಾವಿಯಾಗಿ ದಿನಾಂಕ 27.03.2026 ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಮಂಗಳೂರು ವಿಶ್ವವಿದ್ಯಾನಿಯದ ಆಡಳಿತ ಸೌಧದ ರಾಣಿ ಅ ಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2025-26ನೇ ಸಾಲಿನ ತೃತೀಯ ವಿಶೇಷ ಸಭೆಯ ನಡವಳಿಗಳು.**

ಉಪಸ್ಥಿತರು:

ಅನುಪಸ್ಥಿತರು:

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು, ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳನ್ನು, ಎಲ್ಲಾ ನಿಕಾಯದ ಡೀನರುಗಳನ್ನು ಮತ್ತು ಶೈಕ್ಷಣಿಕ ಮಂಡಳಿಯ ಸದಸ್ಯರುಗಳನ್ನು ಸ್ವಾಗತಿಸಿ, ಸಭಾಧ್ಯಕ್ಷರಲ್ಲಿ ಸಭೆಯನ್ನು ಮುಂದುವರಿಸುವಂತೆ ಕೋರಿದರು. ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನೂ ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

## ಸ್ವಾಗತ:

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ಕಲಾ ನಿಕಾಯದ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಪ್ರೊ. ಸೋಮಣ್ಣ,** ಹಿರಿಯ ಪ್ರಾಧ್ಯಾಪಕರು, ಎಸ್.ವಿ.ಪಿ. ಕನ್ನಡ ಅಧ್ಯಯನ ಸಂಸ್ಥೆ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ **ಪ್ರೊ. ಜಿ.ಕೆ.ನಾಗರಾಜ** ಹಿರಿಯ ಪ್ರಾಧ್ಯಾಪಕರು , ರಸಾಯನಶಾಸ್ತ್ರ ವಿಭಾಗ , ಮಂಗಳೂರು ವಿಶ್ವವಿದ್ಯಾನಿಲಯ ಇ ವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ **30(1)(x)** ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಗೆ ವಿದ್ಯಾರ್ಥಿ ಪ್ರತಿನಿಧಿಗಳನ್ನು ನಾಮನಿರ್ದೇಶನ ಮಾಡುವ ಪರಿನಿಯಮದ ಪ್ರಕಾರ ಶೈಕ್ಷಣಿಕ ಮಂಡಳಿಗೆ ಸದಸ್ಯರುಗಳನ್ನಾಗಿ ನಾಮನಿರ್ದೇಶನ ಮಾಡಲಾಗಿರುವ **ಶ್ರೀ ಕೃಷ್ಣ ಪ್ರದೀಪ ಡಿ .ಎಸ್.,** ಪ್ರಥಮ ಎಂ .ಕಾಂ., ಡಾ. ಕೆ. ಶಿವರಾಮ ಕಾರಂತ

ಸರ್ಕಾರಿ ಪ್ರಥಮ ದರ್ಜೆ ಕಾಲೇಜು , ಬೆಳ್ಳಾರೆ ಹಾಗೂ **ಕು. ಅಪೂರ್ವ ಅಶೋಕ್ ದೇವಾಡಿಗ ,** ದ್ವಿತೀಯ ಬಿ.ಸಿ.ಎ., ಡಾ. ಬಿ.ಬಿ. ಹೆಗ್ಡೆ ಪ್ರಥಮ ದರ್ಜೆ ಕಾಲೇಜು, ಕುಂದಾಪುರ ಇವರನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

## ಕೃತಜ್ಞತೆ:

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ವಿಶ್ವವಿದ್ಯಾನಿಲಯದ ಕಲಾ ನಿಕಾಯದ ಡೀನರ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಪ್ರೊ. ಪರಿಣಿತ,** ಪ್ರಾಧ್ಯಾಪಕರು, ಸ್ನಾತಕೋತ್ತರ ಆಂಗ್ಲ ಅಧ್ಯಯನ ವಿಭಾಗ , ಮಂಗಳೂರು ವಿಶ್ವವಿದ್ಯಾನಿಲಯ ಇವರ ಡೀನರ ಅಧಿಕಾರಾವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1)(viii)ರ ಪ್ರಕಾರ ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ನಾಮನಿರ್ದೇಶನಗೊಂಡಿದ್ದ **ಪ್ರೊ. ವಿಶಾಲಾಕ್ಷಿ ಬಿ .,** ಹಿರಿಯ ಪ್ರಾಧ್ಯಾಪಕರು , ಸ್ನಾತಕೋತ್ತರ ರಸಾಯನಶಾಸ್ತ್ರ ಅಧ್ಯಯನ ವಿಭಾಗ , ಮಂಗಳೂರು ವಿಶ್ವವಿದ್ಯಾನಿಲಯ ಇವರು ವಯೋನಿವೃತ್ತಿ ಹೊಂದಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರಿಬ್ಬರು ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದನ್ನು ಸ್ಮರಿಸಿ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಯ ಪರವಾಗಿ ಕೃತಜ್ಞತಾಪೂರ್ವಕ ವಂದನೆಗ ಳನ್ನು ಸಲ್ಲಿಸಲಾಯಿತು.

## ಪ್ರಾಸ್ತಾವಿಕ

**ಈ ಕೆಳಗಿನ ವಿಷಯವನ್ನು ಸಭೆಯ ಗಮನಕ್ಕೆ ತರಲಾಯಿತು.**

1. ದಿನಾಂಕ 28.03.2026 ರಂದು ನಡೆಯಲಿರುವ 44ನೇ ವಾರ್ಷಿಕ ಘಟಿಕೋತ್ಸವದ ಸಿದ್ಧತೆಗಳ ಬಗ್ಗೆ ಹಾಗೂ ಘನತೆವೆತ್ತ ಕುಲಾಧಿಪತಿಗಳು, ಸಹಕುಲಾಧಿಪತಿಗಳು ಮತ್ತು ಘಟಿಕೋತ್ಸವ ಭಾಷಣ ನೀಡಲಿರುವ ಮುಖ್ಯ ಅತಿಥಿಗಳ ಉಪಸ್ಥಿತಿ ಹಾಗೂ ಘಟಿಕೋತ್ಸವ ಕಾರ್ಯಕ್ರಮದ ವಿವರವನ್ನು ಸಭೆಗೆ ನೀಡಲಾಯಿತು.

**I. ಈ ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ:** **ಪರೀಕ್ಷಾಂಗ:ಶೈ.ವಿ.ಸ.3 : 1 (2025-26)**

**ವಿಷಯ:** 44ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪಡೆಯಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳ ಪಟ್ಟಿ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ: ಶೈ.ಮ.:ವಿ.ಸ.3 : 2 (2025-26)**

**ವಿಷಯ:** ಮಂಗಳೂರು ವಿಶ್ವವಿದ್ಯಾ ನಿಲಯದ 44ನೇ ವಾರ್ಷಿಕ ಘಟಿಕೋತ್ಸವದ ಸಂದರ್ಭದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಮಾನ್ಯ ಕುಲಸಚಿವರು ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| **ಸಹಿ/-** | **ಸಹಿ/-** |
| **ಕುಲಸಚಿವರು** | **ಕುಲಪತಿಗಳು.** |

.